# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ-190, ಮಂಗಮ್ಮನಪಾಳ್ಯ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ರವರ ತಿದ್ದುಪಡಿ ಆದೇಶ ಸಂಖ್ಯೆ: ಬಿ12(5)/ಪಿ.ಆರ್/35/2020-21 ದಿ: 02.10.2020ರ ಆದೇಶದಂತೆ ದಿನಾಂಕ: 07.10.2020 ರಂದು ಬೆಳಿಗ್ಗೆ 11.30 ಘಂಟೆಗೆ ವಾರ್ಡ್ ಸಂಖ್ಯೆ 190-ಮಂಗಮ್ಮನಪಾಳ್ಯ, ವಾರ್ಡ್ ಕಛೇರಿ (ಹೆಚ್.ಎಸ್.ಆರ್ ಉಪವಿಭಾಗ) ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

**ಸಭೆಯಲ್ಲಿ ಹಾಜರಿದ್ದ ಸದಸ್ಯರು/ಅಧಿಕಾರಿಗಳು.**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ |
|---|---|---|
| 1 | ಶ್ರೀ ಟಿ. ಹನುಮಂತರಾಯ | ಅಧ್ಯಕ್ಷರು/ ನೋಡಲ್ ಅಧಿಕಾರಿಗಳು |
| 2 | ಶ್ರೀ ರವಿ ಡಿ | ಸಂಚಾಲಕರು/ ಕಾರ್ಯದರ್ಶಿಗಳು |
| 3 | ಶ್ರೀಮತಿ ಲಕ್ಷ್ಮೀ | ಸಹ ಕಂದಾಯ ಅಧಿಕಾರಿ |
| 4 | ಶ್ರೀ ಸಾಯಬಣ್ಣ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 5 | ಶ್ರೀ ರಮೇಶ್ ಡಿ | ಕಿ.ಅ. (ಎಲೆಕ್ಟ್ರಿಕಲ್) ಬಿ.ಬಿ.ಎಂ.ಪಿ |
| 6 | ಶ್ರೀ ವಿಕ್ರಾಂತ ಕೆ | ಸ.ಅ. ಎಸ್.ಡಬ್ಲ್ಯೂ.ಡಿ |
| 7 | ಶ್ರೀ ಹೊನ್ನೂರು ಪಾಷ | ಕಿರಿಯ ಆರೋಗ್ಯ ಪರಿವೀಕ್ಷಕರು, |
| 8 | ಶ್ರೀ ಸೈಯದ್ ಸಲಾಂ | ಸದಸ್ಯರು |
| 9 | ಶ್ರೀ ಶ್ರೀನಿವಾಸ ರೆಡ್ಡಿ | ಸದಸ್ಯರು |
| 10 | ಶ್ರೀ ಸುರೇಶ್ ರೆಡ್ಡಿ | ಸದಸ್ಯರು |
| 11 | ಶ್ರೀ ಚಂದ್ರ ರೆಡ್ಡಿ | ಸದಸ್ಯರು |

ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ ಟಿ ಹನುಮಂತರಾಯ ಮತ್ತು ಕಾರ್ಯದರ್ಶಿಗಳಾದ ಶ್ರೀ ಡಿ. ರವಿ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು, ಅಧ್ಯಕ್ಷರು ವಾರ್ಡ್ ಸಭೆಗೆ ಹಾಜರಿಸಿರುವ ಸದಸ್ಯರಿಗೆ ಮತ್ತು ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಪ್ರಸ್ತಾಪಿಸಲು ಕೋರಿದ್ದರು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ಸ್ವಯಂ ಪರಿಚಯ ಮಾಡಿಕೊಂಡು ವಾರ್ಡ್ ವ್ಯಾಪ್ತಿಯಲ್ಲಿ ಘನ ತ್ಯಾಜ್ಯ ನಿರ್ವಹಣೆ, ರಸ್ತೆ ಗುಂಡಿ ಮುಚ್ಚುವ ಬಗ್ಗೆ, ಬೀದಿ ದೀಪಗಳ ನಿರ್ವಹಣೆ ಮತ್ತು ಕೋವಿಡ್ ಸಾಂಕ್ರಾಮಿಕ ರೋಗಕ್ಕೆ ಸಂಬಂಧಿಸಿದ ವಿಷಯವನ್ನು ಚರ್ಚಿಸಲು ಸಾರ್ವಜನಿಕರಿಗೆ ಅನುವು ಮಾಡಲಾಯಿತು.

1. **ಬಿ.ಬಿ.ಎಂ.ಪಿ (ವಿದ್ಯುತ್)**

   ಬೀದಿ ದೀಪಗಳು:- ವಾರ್ಡ್ ಸದಸ್ಯರಾದ ಶ್ರೀ ಸುರೇಶ್ ರೆಡ್ಡಿ ರವರು ವಾರ್ಡ್ ವ್ಯಾಪ್ತಿಯಲ್ಲಿ ಬಹುತೇಕ ಕಡೆ ಬೀದಿ ದೀಪಗಳು ಸಮರ್ಪಕವಾಗಿ ಉರಿಯುತ್ತಿಲ್ಲ ಇದರಿಂದ ರಾತ್ರಿ ವೇಳೆಯಲ್ಲಿ ಸಂಚಾರಿಸಲು ಸಾರ್ವಜನಿಕರಿಗೆ ಸಂಚಾರಿಸಲು ತೊಂದರೆಯಾಗುತ್ತಿರುವ ಬಗ್ಗೆ ದೂರಿದರೂ.

   ಈ ಬಗ್ಗೆ ಸಹಾಯಕ ಅಭಿಯಂತರರು ವಿದ್ಯುತ್ ಬಿ.ಬಿ.ಎಂ.ಪಿ ರವರು ವಾರ್ಡ್ ವ್ಯಾಪ್ತಿಯಲ್ಲಿ ಸ್ಥಳ ಪರಿವೀಕ್ಷಣೆ ಮಾಡಿ ಮುಂದಿನ ದಿನಗಳಲ್ಲಿ ಸಮರ್ಪಕವಾಗಿ ನಿರ್ವಹಿಸಲು ಸದಸ್ಯರಾದ ಸುರೇಶ್ ರೆಡ್ಡಿಯವರಿಗೆ ಉತ್ತರಿಸಿದರು.

Scanned with Car

2. **ಆರೋಗ್ಯ ಇಲಾಖೆ :**

ಮಂಗಮ್ಮನಪಾಳ್ಯ ವಾರ್ಡ್ ವ್ಯಾಪ್ತಿಯಲ್ಲಿರುವ ಮಾಂಸ ಅಂಗಡಿಗಳ ಸಂಖ್ಯೆಗಳೆಷ್ಟು ಅದರಲ್ಲಿ ಅಧಿಕೃತವೆಷ್ಟು/ ಅನಧಿಕೃತವೆಷ್ಟು ಮತ್ತು ಅನಧಿಕೃತ ಮಂಸದ ಅಂಗಡಿಗಳು ಹೆಚ್ಚಾಗಿ ರಸ್ತೆಯಲ್ಲಿ ನಾಗರೀಕರು ಸಂಚಾರಿಸಲು ಅನಾನುಕೂಲವಾಗಿದ್ದು, ಮಾಂಸದ ಅಂಗಡಿಗಳಿಂದ ದುರವಾಸನೆಯಾಗಿ ಸಾಂಕ್ರಾಮಿಕ ರೋಗಗಳು ಬರುವ ಸಾಧ್ಯತೆಗಳಿದ್ದು, ಆದ್ದರಿಂದ ಕೂಡಲೇ ಕ್ರಮಕ್ಕೆಗೊಳ್ಳಲು ಮಾನ್ಯ ಸದಸ್ಯರಾದ ಸೈಯದ್ ಸಲಾಂ ಮತ್ತು ಚಂದ್ರ ರೆಡ್ಡಿ ರವರು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

ಈ ಬಗ್ಗೆ ವಾರಕ್ಕೊಮ್ಮೆ ಪಾದಚಾರಿ ಮಾರ್ಗವನ್ನು ಎಲ್ಲಾ ವಿಭಾಗದ ಅಧಿಕಾರಿ/ಸಿಬ್ಬಂದಿಗಳ ಸಹಕಾರದೊಂದಿಗೆ ಸ್ಥಳ ಪರಿವೀಕ್ಷಣೆ ಮಾಡಿ ತೆರವುಗೊಳಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ಮತ್ತು ಕಾರ್ಯದರ್ಶಿಗಳು ಸದಸ್ಯರುಗಳಿಗೆ ತಿಳಿಸಿ ಸೂಕ್ತ ಕ್ರಮ ಜರುಗಿಸಲು ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ಸೂಚಿಸಿದ್ದರು.

3. **ಬಿ.ಡಬ್ಲ್ಯೂ.ಎಸ್.ಎಸ್.ಬಿ :**

ಮಂಗಮ್ಮನಪಾಳ್ಯ ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ ವಿವರ ಮತ್ತು ಮಂಗಮ್ಮನಪಾಳ್ಯ ವಾರ್ಡ್ ದಟ್ಟಣೆ ಪ್ರದೇಶವಾಗಿದ್ದು, ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗದಂತೆ ಒಳಚರಂಡಿ ಕಾಮಗಾರಿ ನಡೆಸಲು ಹಾಗೂ ಸ್ಥಳದಲ್ಲಿ ಎಚ್ಚರಿಕೆ ಸೂಚನಾ ಫಲಕ ಅಳವಡಿಸಲು ಹಾಗೂ 7ನೇ ಅಡ್ಡ ರಸ್ತೆ ಸೋಮಸುಂದರಪಾಳ್ಯ ಒಳಚರಂಡಿ ಪೈಪ್ ಲೈನ್ ಮಾರ್ಗದಲ್ಲಿ ಅಳವಡಿಸಿ ಸಾರ್ವಜನಿಕರಿಗೆ ಅನುಕೂಲಮಾಡುಂತೆ ಪರ್ಯಾಯ ರಸ್ತೆ ವ್ಯವಸ್ಥೆ ಮಾಡಲು, ವಾಹನ ಸಂಚಾರಕ್ಕೆ ಅನುಕೂಲ ಮಾಡಲು ಸದಸ್ಯರಾದ ಶ್ರೀ ಸೈಯದ ಸಲಾಂ ಕೋರಿರುತ್ತಾರೆ. ಈ ಬಗ್ಗೆ ಬಿಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು, ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿರುತ್ತಾರೆ.

4. **ಕಂದಾಯ ವಿಭಾಗ :**

ಮಂಗಮ್ಮನಪಾಳ್ಯ ವಾರ್ಡ್ ವ್ಯಾಪ್ತಿಯಲ್ಲಿ 'ಬಿ' ಖಾತಾಗಳು ಹೆಚ್ಚಾಗಿದ್ದು, (Reveune belt) ಸ್ಥಳೀಯರು ಅಕ್ರಮವಾಗಿ ಸಾರ್ವಜನಿಕ ರಸ್ತೆಯನ್ನು ಒತ್ತುವರಿ ಮಾಡಿ "ಬಿ" ಖಾತಾ ನೋಂದಾಯಿಸಿಕೊಂಡು ಸಾರ್ವಜನಿಕರಿಗೆ ರಸ್ತೆ ಇಲ್ಲದೆ ಓಡಾಡಲು ತೊಂದರೆಯಾಗಿದ್ದು, ಇದರ ಬಗ್ಗೆ ಕ್ರಮಕ್ಕೆಗೊಳ್ಳಲು ಕೋರಿರುತ್ತಾರೆ. (ಕಂದಾಯ ಅಧಿಕಾರಿಗಳು ಬಿ ಖಾತಾಗಳ ಬಗ್ಗೆ ಪರಿಶೀಲಿಸಿ ರಸ್ತೆ ಒತ್ತುವರಿ ಮಾಡಿಕೊಂಡಿರುವವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿರುತ್ತಾರೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸಾಂಕ್ರಾಮಿ ರೋಗದ ಟೆಸ್ಟ್‌ಗಳನ್ನು ಮಾಡಲು ವ್ಯವಸ್ಥೆ ಮಾಡಿ ಮುಂಜಾಗ್ರತ ಕ್ರಮ ಕೈಗೊಳ್ಳವ ಬಗ್ಗೆ ಚರ್ಚಿಸಿರುತ್ತಾರೆ.

5. **ಕಾಮಗಾರಿ ವಿಭಾಗ :**

ಮಂಗಮ್ಮನಪಾಳ್ಯ ವಾರ್ಡ್ ವ್ಯಾಪ್ತಿಯಲ್ಲಿ ಬರುವ ವಿದ್ಯುತ್ ಚಿತಗಾರಕ್ಕೆ ಬರುವ ಮಾರ್ಗದಲ್ಲಿ ರಸ್ತೆಗೆ ಅಡ್ಡಲಾಗಿ ಗೊಬ್ಬರದ ಯಂತ್ರ ಅಳಡಿಸಿರುತ್ತಾರೆ. ಇದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿರುವ ಬಗ್ಗೆ, ಮಳೆಗಾದಲ್ಲಿ ತಗ್ಗು ಪ್ರದೇಶದಲ್ಲಿ ಮೋರಿಯಲ್ಲಿ ನಿಂತಿರುವ ನೀರನ್ನು ಸರಗಾವಾಗಿ ಹರಿಯಲು ವ್ಯವಸ್ಥ ಮಾಡಲು, ಕೆಲವು ಭಾಗಗಳಲ್ಲಿ ಕಲ್ವರ್ಟ್ ನಿರ್ಮಿಸಿ ನೀರು ಹರಿಸಲು ವ್ಯವಸ್ಥೆ ಮಾಡಲು ಮತ್ತು ಲಕ್ಷ್ಮೀ ಬಡಾವಣೆಯಲ್ಲಿ ಕೆಲವು ರಸ್ತೆಗಳಿಗೆ ಡಾಂಬರೀಕರಣ ಮಾಡಿರುವುದಿಲ್ಲವೆಂದು ಆದ್ದರಿಂದ ಕೂಡಲೇ ಪರಿಶೀಲಿಸಿ ಕ್ರಮ ಕೈಗೊಳ್ಳಲು ಸದಸ್ಯರಾದ ಸೈಯದ್ ಸಲಾಂ, ಸುರೇಶ್ ರೆಡ್ಡಿ, ಶ್ರೀನಿವಾಸ ರೆಡ್ಡಿ ಮತ್ತು ಚಂದ್ರರೆಡ್ಡಿ ರವರುಗಳು ಕೋರಿರುತ್ತಾರೆ.

Scanned with Car

ಈ ಬಗ್ಗೆ ಕೂಡಲೇ ಸ್ಥಳ ಪರಿವೀಕ್ಷಣೆ ಮಾಡಿ ಮಾನ್ಯ ಸದಸ್ಯರುಗಳ ಕೋರಿಕೆಯಂತೆ ಮುಂದಿನ ಕ್ರಿಯಾಯೋಜನೆಯಲ್ಲಿ ಅನುವು ಮಾಡಲಾಗುವುದೆಂದು ಮಾನ್ಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ತಿಳಿಸಿರುತ್ತಾರೆ.

ಈ ಮೇಲಿನ ಎಲ್ಲಾ ವಿಷಯಗಳಿಗೆ ಸಂಬಂಧಪಟ್ಟಂತೆ ಕೂಲಂಕುಷವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿದ್ದ ಎಲ್ಲಾ ಅಧಿಕಾರಿಗಳಿಗೆ ಸೂಚಿಸಿ, ಸಭೆಯನ್ನು ವಂದನಾಪೂರ್ವಕವಾಗಿ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ವಾರ್ಡ್ ನಂ. 190

ಅಧ್ಯಕ್ಷರು/ ನೋಡಲ್ ಅಧಿಕಾರಿಗಳು
ವಾರ್ಡ್ ನಂ. 190 7/10/2020

ಪ್ರತಿಯನ್ನು:-

1. ವಿಶೇಷ್ ಆಯುಕ್ತರು, (ಆಡಳಿತ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿ ಆಯುಕ್ತರು(ಬೊಮ್ಮನಹಳ್ಳಿ ವಲಯ) ರವರ ಅವಗಾಹನೆಗಾಗಿ ಸಲ್ಲಿಸಿದೆ
3. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಸಲ್ಲಿಸಿದೆ.
4. ವಾರ್ಡ್ ಸಮಿತಿಯ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.
5. ಕಛೇರಿ ಪ್ರತಿ.

Scanned with Car